**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ ನಂ. 1041/2022**

| | | | |
|---|---|---|---|
| **ಹೆಸರು** | : | **ಚಂದ್ರಕಾಂತ** | ಚಾ.ಸಾ.23 |
| **ತಂದೆಯ ಹೆಸರು** | : | **ಅಂಬರಾಯ** | ಪ್ರಾ.ಸಾ.10 |
| **ವಯಸ್ಸು** | : | **55 ವರ್ಷ** | ದಿನಾಂಕಃ 09-10-2025 |
| **ಉದ್ಯೋಗ** | : | **PSI** | |
| **ವಾಸಸ್ಥಳ** | : | **ಶಹಬಾದ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

18-04-2022 ರಿಂದ 30-01-2023 ರವರೆಗೆ ರಟಕಲ ಪೋಲಿಸ ಠಾಣೆಯಲ್ಲಿ PSI ಆಗಿ ಕಾರ್ಯನಿರ್ವಹಿಸಿದ್ದೇನೆ.

ದಿನಾಂಕಃ 22-04-2022 ರಂದು ಪ್ರಕರಣದ ಕಡತವನ್ನು ಚಾಸಾ-22ರವರಿಂದ ಪಡೆದು ಅದೇ ದಿನ ಕಾರ್ಯನಿರ್ವಾಹಕ ಇಂಜಿನಿಯರರವರಿಂದ ಆರೋಪಿಯ ವಿರುದ್ದ ಅಭಿಯೋಜನೆಗೆ ಒಳಪಡಿಸಲು ಅನುಮತಿಯನ್ನು ಪಡೆದಿದ್ದೇನೆ. ಸದರಿ ಅನುಮತಿ ಪತ್ರವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-20 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-20(ಎ) ಎಂದು ಗುರುತಿಸಲಾಯಿತು. ದಿನಾಂಕ 01-06-2022 ರಂದು ಕಾರ್ಯನಿರ್ವಾಹಕ ಇಂಜಿನಿಯರವರಿಂದ ಅನುಮತಿ ನೀಡಿರುವ ಬಗ್ಗೆ ಪತ್ರವನ್ನು ಪಡೆದಿದ್ದೇನೆ. ಸದರಿ ಪತ್ರವನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-21 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-21(ಎ) ಎಂದು ಗುರುತಿಸಲಾಯಿತು. ದಿನಾಂಕ 16-06-2022ರಂದು ಗುನ್ಹೆ ಸ್ಥಳದ ಪಹಣಿ ಪತ್ರಿಕೆಯನ್ನು ಪಡೆದಿದ್ದೇನೆ. ಸದರಿ ಪಹಣಿ ಪತ್ರಿಕೆಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-22 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-22(ಎ) ಎಂದು ಗುರುತಿಸಲಾಯಿತು. ದಿನಾಂಕ 21-06-2022ರಂದು ಜೆಸ್ಕಾಂರವರಿಂದ ಆರೋಪಿಯ ವಿರುದ್ದ ಅಭಿಯೋಜನೆ ಪರವಾನಿಗೆ ನೀಡುವ ಅವಶ್ಯಕತೆ ಇರುವುದಿಲ್ಲ ಎಂದು ಪತ್ರವನ್ನು ಪಡೆದಿದ್ದು ಸದರಿ ಪತ್ರವನ್ನು ನಿಪಿ-23 ಎಂದು ಮತ್ತು ಅದರಲ್ಲಿರುವ ನನ್ನ ಸಹಿಯನ್ನು ನಿಪಿ-23(ಎ) ಎಂದು ಗುರುತಿಸಲಾಯಿತು. ಅದೇ ದಿನ ತನಿಖೆ ಪೂರ್ಣಗೊಳಿಸಿ ಆರೋಪಿ ವಿರುದ್ದ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ.

**<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ZHT ವಕೀಲರಿಂದಃ</u>**

ಆರೋಪಿಯ ವಿರುದ್ದ ಅಭಿಯೋಜನೆಗೆ ಜೆಸ್ಕಾಂರವರು ಪರವಾನಿಗೆಯನ್ನು ನೀಡಿರುತ್ತಾರೆ. ನನ್ನ ತನಿಖೆ

ಕಾಲಕ್ಕೆ ನಾನು ಘಟನಾ ಸ್ಥಳಕ್ಕೆ ಹೋಗಿರುವುದಿಲ್ಲ. ಘಟನಾ ಸ್ಥಳದಲ್ಲಿದ್ದ ವೈಯರಿಗೆ ಯಾವುದೇ ವಿದ್ಯುತ ಸಂಪರ್ಕ ಇರಲಿಲ್ಲ ಎಂದರೆ ಸರಿಯಲ್ಲ. ನಮ್ಮ ಸಿಬ್ಬಂದಿಗಳು ಯಾವ ದಿನಾಂಕ ಹಾಗೂ ಸಮಯದಂದು ಘಟನಾ ಸ್ಥಳಕ್ಕೆ ಬೇಟಿ ನೀಡಿರುತ್ತಾರೆ ಎಂದು ಪ್ರಶ್ನಿಸಿದಾಗ ಸಾಕ್ಷಿ ಅದು ಮೊದಲಿನಾ ತನಿಖಾಧಿಕಾರಿಗಳು ಮಾಡಿರುತ್ತಾರೆ ಎಂದು ನುಡಿಯುತ್ತಾರೆ.

ಬೇರೆ ಸ್ಥಳದಲ್ಲಿ ಮೃತಪಟ್ಟ ಶವವನ್ನು ಘಟನಾ ಸ್ಥಳದಲ್ಲಿ ಇಟ್ಟು ನನ್ನ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಕಡತವನ್ನು ಪರಿಶೀಲಿಸದೇ ಆರೋಪಿಯ ವಿರುದ್ದ ಆರೋಪ ಸಾಭೀತು ಆಗದೇ ಇದ್ದರು ಸಹ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿ ಈ ದಿನ ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣದಲ್ಲಿ ಆರೋಪಿ ಯಾವುದೇ ತಪ್ಪು ಮಾಡಿರುವುದಿಲ್ಲ ಮತ್ತು ಯಾವುದೇ ನಿರ್ಲಕ್ಷ್ಯತನ ತೋರಿಸಿರುವುದಿಲ್ಲ ಎಂದರೆ ಸರಿಯಲ್ಲ. ಅಂತಿಮ ವರದಿ ಸಲ್ಲಿಸುವ ಮೊದಲು ನನ್ನ ಮೇಲಾಧಿಕಾರಿಗಳಿಗೆ ಮಾಹಿತಿಯನ್ನು ನೀಡಿರುತ್ತೇನೆ. ನನ್ನ ಮೇಲಾಧಿಕಾರಿಗಳ ಗಮನಕ್ಕೆ ತರದೇ ಸುಳ್ಳು ಅಂತಿಮ ವರದಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯವಿಚಾರಣೆಯಲ್ಲಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ**